# ನೂತನ ವಿಧಾನಪರಿಷತ್ ಸದಸ್ಯರಿಂದ ಪ್ರಮಾಣ ವಚನ





ವಿಧಾನ ಪರಿಷತ್‌ಗೆ ಆಯ್ಕೆಯಾದ ಬೆಂಗಳೂರು ನಗರ ಶಿಕ್ಷಕರ ಕ್ಷೇತ್ರದ ರಾಮೋಜಿಗೌಡ, ಜೆಡಿಎಸ್‌ನ ಜವರಾಯಿಗೌಡ ಪ್ರಮಾಣವಚನ ಸ್ವೀಕರಿಸಿದರು.

# ಶಾಸಕ ಐವನ್ ಡಿಸೋಜಾ ಪ್ರಮಾಣವಚನ

**ಬೆಂಗಳೂರು:** ವಿಧಾನ ಸಭೆಯಿಂದ ವಿಧಾನ ಪರಿಷತ್ತಿಗೆ ಚುನಾಯಿತರಾದ ಐವನ್ ಡಿಸೋಜಾ ರವರು ಸೋಮವಾರ ವಿಧಾನಸೌಧದ ಬ್ಯಾಕ್ವೆಂಟ್ ಹಾಲ್‌ನಲ್ಲಿ ನಡೆದ ನೂತನ ಶಾಸಕರುಗಳ ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ತಿನ ಶಾಸಕರಾಗಿ ದೇವರ ಹೆಸರಿನಲ್ಲಿ ಮತ್ತು ಸಂವಿಧಾನದ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು.



ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೂಗುಚ್ಛ ನೀಡಿ ಶುಭಕೋರಿದರು. ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ , ಕಾನೂನು ಮತ್ತು ಸಂಸದೀಯ ಸಚಿವ ಹೆಚ್.ಕೆ ಪಾಟೀಲ್ ಹಾಗೂ ವಿಧಾನ ಪರಿಷತ್ತಿನ ಕಾರ್ಯದರ್ಶಿ ಮಹಾಲಕ್ಷ್ಮಿ ಉಪಸ್ಥಿರಿದ್ದರು.